**Akashvani: Bangalore**
**National Bulletin In Kannada**
**17.10.2025 : 13.10hrs**

**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**

**ಮುಖ್ಯಾಂಶಗಳು:**

1. ಮೊದಲ ತೇಜಸ್ **LCA MK1A** ಯುದ್ಧ ವಿಮಾನ; ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರಿಂದ ಇಂದು ಅನಾವರಣ
2. ಛತ್ತೀಸ್‌ಗಡದಲ್ಲಿ ಶಸ್ತ್ರಾಸ್ತ್ರ ತ್ಯಜಿಸಿದ ೨೦೮ ಮಾವೋವಾದಿಗಳು; ನಕ್ಸಲ್ ಮುಕ್ತ ಭಾರತದೆಡೆಗೆ ಮಹತ್ವದ ಹೆಜ್ಜೆ
3. ನವದೆಹಲಿಯಲ್ಲಿ ವಿದೇಶಾಂಗ ಸಚಿವ ಡಾ.ಎಸ್ ಜೈಶಂಕರ್ - ಬ್ರೆಜಿಲ್ ಉಪಾಧ್ಯಕ್ಷ ಗೆರಾಲ್ಡೊ ಅಲ್ಕಮಿನ್ ಸಭೆ
4. ಡೆನ್ಮಾರ್ಕ್ ಓಪನ್ ಬ್ಯಾಡ್ಮಿಂಟನ್ ; ಪುರುಷರ ಸಿಂಗಲ್ಸ್‌ನಲ್ಲಿ ಭಾರತದ ಲಕ್ಷ್ಯ ಸೇನ್ ಕ್ವಾರ್ಟರ್ ಫೈನಲ್ಸ್ ಪ್ರವೇಶ
5. ಐಸಿಸಿ ಮಹಿಳಾ ಏಕದಿನ ಕ್ರಿಕೆಟ್ ವಿಶ್ವಕಪ್; ಇಂದು ದಕ್ಷಿಣ ಆಫ್ರಿಕಾ - ಶ್ರೀಲಂಕಾ ಮುಖಾಮುಖಿ

***********

ಹಿಂದೂಸ್ತಾನ್ ಏರೋನಾಟಿಕ್ಸ್‌ನ ಹೊಸ ನಾಸಿಕ್ ಉತ್ಪಾದನಾ ಸೌಲಭ್ಯದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ಮೊದಲ ತೇಜಸ್ LCA MK1A ಯುದ್ಧ ವಿಮಾನವನ್ನು ಅನಾವರಣಗೊಳಿಸಲಿದ್ದಾರೆ. ಇದೇ ವೇಳೆ ರಕ್ಷಣಾ ಸಚಿವರು HTT-40 ತರಬೇತುದಾರ ವಿಮಾನಕ್ಕಾಗಿ ಎರಡನೇ ಉತ್ಪಾದನಾ ಸೌಲಭ್ಯವನ್ನು ಉದ್ಘಾಟಿಸಲಿದ್ದಾರೆ.ಬೆಂಗಳೂರಿನಲ್ಲಿ ಈಗಾಗಲೇ ಅಸ್ತಿತ್ವದಲ್ಲಿರುವ ಎರಡು ಹೊಸ ಸೌಲಭ್ಯಗಳಲ್ಲಿ ತೇಜಸ್ ಯುದ್ಧ ವಿಮಾನಗಳ ಉತ್ಪಾದನೆ ನಡೆಯುತ್ತಿದೆ, ಇವು ವಾರ್ಷಿಕವಾಗಿ ೧೬ ಜೆಟ್‌ಗಳನ್ನು ಉತ್ಪಾದಿಸುತ್ತವೆ. ನಾಸಿಕ್‌ನಲ್ಲಿರುವುದು ಮೂರನೇ ಉತ್ಪಾದನಾ ಸೌಲಭ್ಯವಾಗಿದೆ. ಈ ಸೌಲಭ್ಯವನ್ನು ೧೫೦ ಕೋಟಿ ರೂಪಾಯಿಗಳಿಗಿಂತ ಹೆಚ್ಚು ಹೂಡಿಕೆಯೊಂದಿಗೆ ಸ್ಥಾಪಿಸಲಾಗಿದೆ, ಇದು ವಾರ್ಷಿಕವಾಗಿ ಎಂಟು ಜೆಟ್‌ಗಳನ್ನು ಉತ್ಪಾದಿಸಲಿದ್ದು, ಎಚ್‌ಎಎಲ್‌ನ ಉತ್ಪಾದನಾ ಸಾಮರ್ಥ್ಯವನ್ನು ವಾರ್ಷಿಕವಾಗಿ ೨೪ ವಿಮಾನಗಳಿಗೆ ಹೆಚ್ಚಿಸುತ್ತದೆ. LCA MK1A ಭಾರತೀಯ ವಾಯುಪಡೆಯ ಮಿಗ್-೨೧ ಯುದ್ಧ ವಿಮಾನಗಳ ಬದಲಾಗಿ ವಿನ್ಯಾಸಗೊಳಿಸಲಾದ ಹೆಚ್ಚು ಮುಂದುವರಿದ, ಬಹು-ಪಾತ್ರ ನಿರ್ವಹಿಸುವ ಯುದ್ಧ ವಿಮಾನವಾಗಿದೆ. MK1A ತೇಜಸ್‌ನ ಮುಂದುವರಿದ ರೂಪವಾಗಿದ್ದು, ಇದು ಸುಧಾರಿತ ಯುದ್ಧ ಕಾರ್ಯತಂತ್ರ ಮತ್ತು ಆಗಸದಲ್ಲೇ ಇಂಧನ ತುಂಬುವ ಸಾಮರ್ಥ್ಯಗಳನ್ನು ಒಳಗೊಂಡಂತೆ ಗಮನಾರ್ಹ ಸುಧಾರಣೆಗಳನ್ನು ಒಳಗೊಂಡಿದೆ.

***********

ಛತ್ತೀಸ್‌ಗಢದಲ್ಲಿ ಇಂದು ಒಟ್ಟು ೨೦೮ ನಕ್ಸಲರು ತಮ್ಮ ಶಸ್ತ್ರಾಸ್ತ್ರಗಳನ್ನು ತ್ಯಜಿಸಿದ್ದಾರೆ. ಅಧಿಕಾರಿಗಳ ಪ್ರಕಾರ, ಅಬುಜ್ಮದ್‌ನ ಹೆಚ್ಚಿನ ಭಾಗ ನಕ್ಸಲ್ ಪ್ರಭಾವದಿಂದ ಮುಕ್ತವಾಗಿದೆ, ಇದು ಉತ್ತರ ಬಸ್ತಾರ್ ಪ್ರದೇಶದಲ್ಲಿ ದಶಕಗಳಿಂದ ನಡೆದ ಭಯೋತ್ಪಾದನೆಯನ್ನು ಕೊನೆಗೊಳಿಸಿದೆ. ಅಧಿಕಾರಿಗಳ ಪ್ರಕಾರ, ಶರಣಾದ ಗುಂಪಿನಲ್ಲಿ ೧೧೦ ಮಹಿಳೆಯರು ಮತ್ತು ೯೮ ಪುರುಷರು ಸೇರಿದ್ದಾರೆ, ಅವರು ನಿಷೇಧಿತ ಸಿಪಿಐ ಮಾವೋವಾದಿ ಸಂಘಟನೆಯ ವಿವಿಧ ಶ್ರೇಣಿಗಳನ್ನು ಪ್ರತಿನಿಧಿಸುತ್ತಾರೆ. ಮಾವೋವಾದಿಗಳು ೧೯ ಎಕೆ-೪೭ ರೈಫಲ್‌ಗಳು ಮತ್ತು ೧೭ ಎಸ್‌ಎಲ್‌ಆರ್ ರೈಫಲ್‌ಗಳು ಸೇರಿದಂತೆ ೧೫೩ ಶಸ್ತ್ರಾಸ್ತ್ರಗಳನ್ನು ಪೋಲಿಸರಿಗೆ ಒಪ್ಪಿಸಿದ್ದಾರೆ.

***********

ಕೇಂದ್ರ ವಿದೇಶಾಂಗ ಸಚಿವ ಡಾ.ಎಸ್ ಜೈಶಂಕರ್ ನವದೆಹಲಿಯಲ್ಲಿಂದು ಬ್ರೆಜಿಲ್ ಉಪಾಧ್ಯಕ್ಷ ಗೆರಾಲ್ಡೊ ಅಲ್ಕಮಿನ್ ಅವರೊಂದಿಗೆ ಸಭೆ ನಡೆಸಿದರು, ವ್ಯಾಪಾರ, ಹೂಡಿಕೆ, ಇಂಧನ, ಸಂಪರ್ಕ, ಆರೋಗ್ಯ ಮತ್ತು ತಂತ್ರಜ್ಞಾನ ಸೇರಿದಂತೆ ಹಲವಾರು ಕ್ಷೇತ್ರಗಳಲ್ಲಿ ಸಹಕಾರವನ್ನು ಹೆಚ್ಚಿಸುವ ಮಾರ್ಗಗಳ ಕುರಿತು ಉಭಯ ನಾಯಕರು ಚರ್ಚಿಸಿದರು. ಅಲ್ಕ್ಮಿನ್ ಬ್ರೆಜಿಲ್‌ನ ಅಭಿವೃದ್ಧಿ, ಕೈಗಾರಿಕೆ, ವ್ಯಾಪಾರ ಮತ್ತು ಸೇವೆಗಳ ಸಚಿವರೂ ಆಗಿದ್ದಾರೆ."ವ್ಯಾಪಾರ, ಹೂಡಿಕೆ, ಇಂಧನ, ಸಂಪರ್ಕ, ಆರೋಗ್ಯ ಮತ್ತು ತಂತ್ರಜ್ಞಾನದಲ್ಲಿ ಹೆಚ್ಚಿನ ಸಹಕಾರದ ಸಾಧ್ಯತೆಯ ಕುರಿತು ಚರ್ಚಿಸಲಾಗಿದೆ ಎಂದು ಸಭೆಯ ನಂತರ ಸಚಿವ ಜೈಶಂಕರ್ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.ನಿನ್ನೆ ಬ್ರೆಜಿಲ್ ಉಪಾಧ್ಯಕ್ಷ ಗೆರಾಲ್ಡೊ ಅಲ್ಕಮಿನ್, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರವನ್ನು ಭೇಟಿಯಾಗಿ ಇಂಧನ ಸಹಕಾರವನ್ನು ಹೆಚ್ಚಿಸುವುದು, ಔಷಧಗಳಲ್ಲಿ ಪಾಲುದಾರಿಕೆಯನ್ನು ಬಲಪಡಿಸುವುದು, ರಕ್ಷಣೆ, ಸಂಶೋಧನಾ ಹೂಡಿಕೆಗಳು, ಸಂಪರ್ಕ ಮತ್ತು ಕೃತಕ ಬುದ್ಧಿಮತ್ತೆ ಮತ್ತು ಡಿಜಿಟಲೀಕರಣದಂತಹ ಉದಯೋನ್ಮುಖ ಕ್ಷೇತ್ರಗಳಲ್ಲಿ ಸಹಯೋಗಗಳ ಕುರಿತು ಮಾತುಕತೆಗಳನ್ನು ನಡೆಸಿದರು.

***********

ಈಶಾನ್ಯ ಪ್ರದೇಶವು ದೇಶದ ಬೆಳವಣಿಗೆಯ ಚಾಲಕ ಶಕ್ತಿಯಾಗಿ ಮಾರ್ಪಟ್ಟಿದೆ ಎಂದು ಕೇಂದ್ರ ಈಶಾನ್ಯ ಪ್ರದೇಶಾಭಿವೃದ್ಧಿ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ತಮ್ಮ ಸಚಿವಾಲಯದ ಒಂದು ವರ್ಷದ ಸಾಧನೆಯ ಕುರಿತು ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಅವರು, ಕಳೆದ ೧೧ ವರ್ಷಗಳಲ್ಲಿ, ಈಶಾನ್ಯ ಪ್ರದೇಶದ ಸಾಮರ್ಥ್ಯವನ್ನು ಜಾಗತಿಕ ವೇದಿಕೆಯಲ್ಲಿ ಪ್ರದರ್ಶಿಸಲು ಸರ್ಕಾರ ಕೆಲಸ ಮಾಡಿದೆ. ಕಳೆದ ಹನ್ನೊಂದು ವರ್ಷಗಳಲ್ಲಿ ಈಶಾನ್ಯದ ವಿಮಾನ ನಿಲ್ದಾಣಗಳ ಸಂಖ್ಯೆ ಕೇವಲ ೯ರಿಂದ ೧೭ ಕ್ಕೆ ಏರಿಸಲಾಗಿದೆ ಎಂದು ಹೇಳಿದರು. ಈಶಾನ್ಯ ರಾಜ್ಯಗಳಲ್ಲಿನ ರಾಷ್ಟ್ರೀಯ ಹೆದ್ದಾರಿಗಳ ಉದ್ದ ಹತ್ತು ಸಾವಿರ ಕಿಲೋಮೀಟರ್‌ಗಳಿಂದ ೧೬ ಸಾವಿರ ಕಿಲೋಮೀಟರ್‌ಗಳಿಗೆ ಏರಿದೆ ಎಂದು ತಿಳಿಸಿದರು.ಈ ವರ್ಷ ಮೇ ತಿಂಗಳಲ್ಲಿ ನಡೆದ ರೈಸಿಂಗ್ ಈಶಾನ್ಯ ಶೃಂಗಸಭೆಯಲ್ಲಿ ನಾಲ್ಕು ಲಕ್ಷ ೪೮ ಸಾವಿರ ಕೋಟಿ ರೂಪಾಯಿಗಳ ಹೂಡಿಕೆ ಒಪ್ಪಂದಗಳನ್ನು ಮಾಡಿಕೊಳ್ಳಲಾಗಿದೆ ಎಂದು ಸಚಿವರು ಹೇಳಿದರು.

***********

ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರು ಬಿಷ್ಕೆಕ್‌ನಲ್ಲಿ ಉಜ್ಬೇಕಿಸ್ತಾನ್ ಭದ್ರತಾ ಮಂಡಳಿಯ ಕಾರ್ಯದರ್ಶಿ ವಿಕ್ಟರ್ ಮಖ್ಮುಡೋವ್ ಅವರನ್ನು ಭೇಟಿಯಾದರು. ಭದ್ರತೆ ಮತ್ತು ಗುಪ್ತಚರ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಹಕಾರವನ್ನು ಎರಡೂ ಕಡೆಯವರು ಪರಿಶೀಲಿಸಿದ್ದಾರೆ ಮತ್ತು ಅಫ್ಘಾನಿಸ್ತಾನದಲ್ಲಿನ ಭದ್ರತಾ ಪರಿಸ್ಥಿತಿಯ ಬಗ್ಗೆಯೂ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡಿದ್ದಾರೆ ಎಂದು ಕಿರ್ಗಿಜ್ ಗಣರಾಜ್ಯದಲ್ಲಿರುವ ಭಾರತೀಯ ರಾಯಭಾರ ಕಚೇರಿಯು ತಿಳಿಸಿದೆ.

***********

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ನವದೆಹಲಿಯಲ್ಲಿ ನಡೆಯಲಿರುವ ಆದಿ ಕರ್ಮಯೋಗಿ ಅಭಿಯಾನ ಕುರಿತ ರಾಷ್ಟ್ರೀಯ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ. ವಿಕಸಿತ ಭಾರತ ದೃಷ್ಟಿಕೋನದಡಿಯಲ್ಲಿ ಬುಡಕಟ್ಟು ವ್ಯವಹಾರಗಳ ಸಚಿವಾಲಯ ಈ ಸಮಾವೇಶವನ್ನು ಆಯೋಜಿಸುತ್ತಿದೆ. ಪಿಎಂ ಜನ್‌ಮನ್ ಮತ್ತು ಧರ್ತಿ ಆಬಾ ಅಭಿಯಾನದ ಜೊತೆಯಲ್ಲಿ ಈ ಸಮಾವೇಶವನ್ನು ನಡೆಸಲಾಗುತ್ತಿದೆ.

***********

ಬಿಹಾರ ವಿಧಾನಸಭಾ ಚುನಾವಣೆಯ ಚುನಾವಣಾ ಪ್ರಚಾರದ ಕುರಿತು ಚರ್ಚಿಸಲು ಹಿರಿಯ ಬಿಜೆಪಿ ನಾಯಕ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರೊಂದಿಗೆ ಸಭೆ ನಡೆಸುತ್ತಿದ್ದಾರೆ. ನಿನ್ನೆ, ಸಚಿವ ಅಮಿತ್ ಶಾ, ಹಿರಿಯ ಬಿಜೆಪಿ ನಾಯಕರು ಮತ್ತು ಚುನಾವಣಾ ಸಮಿತಿಯ ಸದಸ್ಯರೊಂದಿಗೆ ಸಭೆ ನಡೆಸಿದ್ದರು. ಕಾರ್ಯಕ್ರಮ ಒಂದರಲ್ಲಿ ಸಚಿವರು, ಮುಖ್ಯಮಂತ್ರಿ ಸ್ಥಾನದ ಬಗ್ಗೆ ನಿರ್ಧಾರವನ್ನು ವಿಧಾನಸಭಾ ಚುನಾವಣೆಯ ನಂತರ ಚುನಾಯಿತ ಶಾಸಕರ ಸಭೆಯಲ್ಲಿ ತೆಗೆದುಕೊಳ್ಳಲಾಗುವುದು ಎಂದು ಹೇಳಿದ್ದರು.

***********

ಕೇರಳದ ಶಬರಿಮಲೆ ಚಿನ್ನದ ಹೊದಿಕೆ ಕಳ್ಳತನ ಪ್ರಕರಣದಲ್ಲಿ ಕೇರಳ ಪೊಲೀಸರ ವಿಶೇಷ ತನಿಖಾ ತಂಡ, ಮೊದಲ ಆರೋಪಿಯನ್ನು ಬಂಧಿಸಿದೆ. ವಿಚಾರಣೆಯ ನಂತರ ಇಂದು ಪ್ರಮುಖ ಆರೋಪಿ ಉನ್ನಿಕೃಷ್ಣನ್ ಪೊಟ್ಟಿಯನ್ನು ಬಂಧಿಸಲಾಗಿದೆ. ಕೇರಳ ಹೈಕೋರ್ಟ್ ನಿರ್ದೇಶನದ ಮೇರೆಗೆ ಕಳ್ಳತನ ಪ್ರಕರಣವನ್ನು ಎಸ್‌ಐಟಿ ತನಿಖೆ ನಡೆಸುತ್ತಿದ್ದು. ಆರೋಪಿಯನ್ನು ಇಂದು ಮಧ್ಯಾಹ್ನ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗುವುದು.

***********

ತೀವ್ರ ಆರ್ಥಿಕ ಬಿಕ್ಕಟ್ಟಿನಲ್ಲಿದ್ದು, ಚೇತರಿಕೆ ಕಂಡಿರುವ ಶ್ರೀಲಂಕಾವನ್ನು ಅಂತರಾಷ್ಟ್ರೀಯ ಹಣಕಾಸು ನಿಧಿ ಶ್ಲಾಘಿಸಿದೆ. ಗಂಭೀರ ಆರ್ಥಿಕ ಸಂಕಷ್ಟ ಎದುರಿಸಿದ ಬೆನ್ನಲ್ಲೇ ಅವರು ಅನುಸರಿಸುತ್ತಿರವ ಸುಧಾರಣ ಕ್ರಮಗಳ ಪುನಃಶ್ಚೇತನ ದಾರಿಗೆ ಬದ್ಧವಾಗಿದೆ ಎಂದು ಐಎಂಎಫ್ ತಿಳಿಸಿದೆ.

***********

ಶ್ರೀಲಂಕಾ ಪ್ರಧಾನಮಂತ್ರಿ ಡಾ.ಹರಿಣಿ ಅಮರಸುರಿಯಾ ನವದೆಹಲಿಯಲ್ಲಿ ನಿನ್ನೆ ನೀತಿ ಆಯೋಗಕ್ಕೆ ಭೇಟಿ ನೀಡಿದರು. ಈ ಸಂದರ್ಭದಲ್ಲಿ ನೀತಿ ಆಯೋಗದ ಕಾರ್ಯವೈಖರಿ ಹಾಗೂ ಸಾಕ್ಷ್ಯಾಧಾರಿತ ನೀತಿ ರೂಪಿಸಿಕೊಳ್ಳುವ ವಿಧಾನವನ್ನು ಅರ್ಥಮಾಡಿಕೊಳ್ಳಲು ಆಸಕ್ತಿ ತೋರಿದರು. ಈ ವೇಳೆ ಶ್ರೀಲಂಕಾದ ಸುಧಾರಣಾ ಪ್ರಯಾಣದ ಕುರಿತಾಗಿ ಮಾತನಾಡುತ್ತಾ, ನೀತಿಯ ಸಮ್ಮಿಲನವನ್ನು ಉತ್ತೇಜಿಸುವ ಸಂಸ್ಥೆಗಳ ಅಗತ್ಯತೆಯನ್ನು ಒತ್ತಿಹೇಳಿದರು. ನೀತಿ ಆಯೋಗದ ಉಪಾಧ್ಯಕ್ಷ ಸುಮನ್ ಬೆರಿ, ಭಾರತದ ಪ್ರಮುಖ ಉಪಕ್ರಮಗಳಾದ ಪಿಎಂ ಗತಿಶಕ್ತಿ ಯೋಜನೆ, ೨೦೨೦ರ ರಾಷ್ಟ್ರೀಯ ಶಿಕ್ಷಣ ನೀತಿ ಮತ್ತು ಪ್ರವಾಸೋದ್ಯಮ-ಸಾಂಸ್ಕೃತಿಕ ವಿನಿಮಯ ಕ್ಷೇತ್ರಗಳಲ್ಲಿ ಸಹಕಾರದ ಸಾಧ್ಯತೆಗಳ ಬಗ್ಗೆ ಪ್ರಸ್ತಾಪಿಸಿದರು.

***********

ಒಡೆನ್ಸ್‌ನಲ್ಲಿ ನಡೆದ ಡೆನ್ಮಾರ್ಕ್ ಓಪನ್ ಬ್ಯಾಡ್ಮಿಂಟನ್ ಟೂರ್ನಿಯ ಪುರುಷರ ಸಿಂಗಲ್ಸ್‌ನಲ್ಲಿ ಭಾರತದ ಲಕ್ಷ್ಯ ಸೇನ್ ಕ್ವಾರ್ಟರ್ ಫೈನಲ್ಸ್ ಪ್ರವೇಶಿಸಿದ್ದಾರೆ. ನಿನ್ನೆ ನಡೆದ ಸೆಮಿಫೈನಲ್ ಪಂದ್ಯದಲ್ಲಿ ಆಂಡರ್ಸ್ ಆಂಟನ್ಸೆನ್ ಅವರನ್ನು ಸೋಲಿಸಿದ ಲಕ್ಷ್ಯ ಸೇನ್ ಇಂದು ನಡೆಯುವ ಪಂದ್ಯದಲ್ಲಿ ಫ್ರಾನ್ಸ್‌ನ ಅಲೆಕ್ಸ್ ಲ್ಯಾನಿಯರ್ ಅವರನ್ನು ಎದುರಿಸಲಿದ್ದಾರೆ. ಪಂದ್ಯ ಸಂಜೆ ೫:೧೦ ಕ್ಕೆ ಆರಂಭವಾಗಲಿದೆ. ಪುರುಷರ ಡಬಲ್ಸ್‌ನಲ್ಲಿ, ಆರನೇ ಶ್ರೇಯಾಂಕದ ಭಾರತದ ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ನಿನ್ನೆ ಚೀನಾ ತೈಪೆಯ ಯಾಂಗ್ ಪೊ-ಹಾನ್ ಮತ್ತು ಲಿಯು ಕುವಾಂಗ್-ಹೆಂಗ್ ಅವರನ್ನು ಸೋಲಿಸುವ ಮೂಲಕ ಕ್ವಾರ್ಟರ್ ಫೈನಲ್ ಪ್ರವೇಶಿದರು. ಭಾರತೀಯ ಜೋಡಿ ಇಂದು ಮಧ್ಯಾಹ್ನ ಇಂಡೋನೇಷ್ಯಾದ ಮುಹಮ್ಮದ್ ರಿಯಾನ್ ಅರ್ಡಿಯಾಂಟೊ ಮತ್ತು ರಹಮತ್ ಹಿದಾಯತ್ ಅವರನ್ನು ಎದುರಿಸಲಿದೆ. ಪಂದ್ಯ ಸಂಜೆ ೪:೩೦ ಕ್ಕೆ ಪ್ರಾರಂಭವಾಗಲಿದೆ.

***********

ಕೊಲಂಬೊದಲ್ಲಿಂದು ನಡೆಯಲಿರುವ ಐಸಿಸಿ ಮಹಿಳಾ ಏಕದಿನ ಕ್ರಿಕೆಟ್ ವಿಶ್ವಕಪ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ಮತ್ತು ಶ್ರೀಲಂಕಾ ವನಿತೆಯರ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ. ನಿನ್ನೆ ವಿಶಾಖಪಟ್ಟಣದಲ್ಲಿ ನಡೆದ ಪಂದ್ಯದಲ್ಲಿ ಬಾಂಗ್ಲಾದೇಶ ವಿರುದ್ಧ ೧೦ ವಿಕೆಟ್‌ಗಳ ಭರ್ಜರಿ ಜಯ ಸಾಧಿಸುವ ಮೂಲಕ ಆಸ್ಟ್ರೇಲಿಯಾ ಸೆಮಿಫೈನಲ್‌ಗೆ ಲಗ್ಗೆಯಿಟ್ಟ ಮೊದಲ ತಂಡವಾಯಿತು.

***********

ಮುಂದಿನ ಎರಡು ದಿನಗಳಲ್ಲಿ ಕೇರಳ, ಮಾಹೆ, ತಮಿಳುನಾಡು, ಪುದುಚೇರಿ ಮತ್ತು ಕಾರೈಕಲ್‌ನಲ್ಲಿ ಗುಡುಗು, ಬಿರುಗಾಳಿ ಮತ್ತು ಮಿಂಚು ಸಹಿತ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

******END*****